ಕರ್ನಾಟಕ ಸರ್ಕಾರ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.265/2021**

ಪಿ.ಡಬ್ಲ್ಯೂ: **4**

ಸಿ.ಡಬ್ಲ್ಯೂ: 7

| | | |
|---|---|---|
| ಹೆಸರು | : | ನಿಂಗನಾಯ್ಕ |
| ತಂದೆಯ ಹೆಸರು | : | ಸೇವ್ಯಾನಾಯ್ಕ |
| ವಯಸ್ಸು | : | 14 ವರ್ಷ |
| ಉದ್ಯೋಗ | : | ಪಿಸಿ 73 |
| ವಾಸಸ್ಥಳ | : | ಲಕ್ಕವಳ್ಳಿ |

**ದಿನಾಂಕ: 04-08-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ : ಸ.ಸ.ಅ. ರವರಿಂದ.**

**2016** ರಿಂದ **2021** ರವರೆಗೆ ನಾನು ಲಕ್ಕವಳ್ಳಿ **ಪೋಲೀಸ್ ಠಾಣೆಯಲ್ಲಿ** ಪೊಲೀಸ್ ಪೇದೆಯಾಗಿ **ಆಗಿ ಕರ್ತವ್ಯ** ನಿರ್ವಹಿಸಿರುತ್ತೇನೆ.

ದಿನಾಂಕ: 11-04-2020 ರಂದು ಮಧ್ಯಾಹ್ನ 2-30 ಗಂಟೆ ಸಮಯದಲ್ಲಿ ನಾನು ಲಕ್ಕವಳ್ಳಿ ಪೊಲೀಸ್ ಠಾಣೆಯಲ್ಲಿರುವಾಗ ಕರಕುಚ್ಚಿ ಗ್ರಾಮದ ಗಸ್ತು ಸಿಬ್ಬಂಧಿಯಾದ ಚಾಸಾ-11 ರವರು ಚಾಸಾ-1 ರವರಿಗೆ ದೂರವಾಣಿ ಕರೆ ಮಾಡಿ ಕರಕುಚ್ಚಿ ಗ್ರಾಮದ ಹರೀಶ್ ಎಂಬುವವರು ಭದ್ರಾ ಹೊಳೆಯಿಂದ ಮರಳನ್ನು ಅಕ್ರಮವಾಗಿ ಸಾಗಿಸುತ್ತಿದ್ದಾರೆಂದು ಚಾಸಾ-1 ರವರಿಗೆ ದೂರವಾಣಿ ಮುಖಾಂತರ ತಿಳಿಸಿದ್ದು, ಚಾಸಾ-1 ರವರು ನನ್ನನ್ನು ಮತ್ತು ಚಾಸಾ-8 ರಿಂದ 10 ರವರನ್ನು ಮಾಹಿತಿ ಬಂದ ಬಗ್ಗೆ ತಿಳಿಸಿದ್ದು, 2-40 ಗಂಟೆ ಸಮಯದಲ್ಲಿ ಇಲಾಖಾ ಜೀಪಿನಲ್ಲಿ ಹೊರಟು ಕರಕುಕಚ್ಚಿ ಗ್ರಾಮದ ಬಸ್ ನಿಲ್ದಾಣಕ್ಕೆ ಬಂದು ಗಸ್ತು ಸಿಬ್ಬಂಧಿಯಾದ ಚಾಸಾ-11 ರವರನ್ನು ಚಾಸಾ-1 ರವರು ಕರೆದು ಇಬ್ಬರು ಪಂಚರನ್ನು ಕರೆದುಕೊಂಡು ಬರಲು ಕಳುಹಿಸಿದರು. ನಂತರ ಅವರು ಚಾಸಾ-2 ಮತ್ತು 3 ರವರು ಕರೆದುಕೊಂಡು ಬಂದಿದ್ದು, ಅವರಿಗೆ ದಾಳಿ ಸಮಯದಲ್ಲಿ ಪಂಚರಾಗಿ ಸಹಕರಿಸಬೇಕೆಂದು ಚಾಸಾ-1 ರವರು ಕೋರಿಕೊಂಡಿದ್ದು, ಅವರನ್ನು ಇಲಾಖಾ ಜೀಪಿನಲ್ಲಿ ಕೂರಿಸಿಕೊಂಡು ಮಾಹಿತಿ ಇದ್ದ ಸ್ಥಳಕ್ಕೆ ಕರಕುಚ್ಚಿ ಗ್ರಾಮದ ರಾಮರಾಜ್ ರವರ

ತೋಟಕ್ಕೆ ಹೋಗುತ್ತಿರುವಾಗ ಭದ್ರಾ ಹೊಳೆ ಕಡೆಯಿಂದ ಬಂದ ಪಿಕ್ ಅಪ್ ವಾಹನದ ಸಂಖ್ಯೆ ಕೆಎ 18 ಸಿ 4311 ರ ಚಾಲಕ ನಮ್ಮ ಇಲಾಖಾ ಜೀಪನ್ನು ನೋಡಿ ಅದನ್ನು ಅಲ್ಲೇ ನಿಲ್ಲಿಸಿ ಓಡಿ ಹೋಗಿರುತ್ತಾನೆ. ಆತನನ್ನು ಹಿಡಿಯಲು ಯತ್ನಿಸಿದಾಗ, ಆತನು ನಮಗೆ ಸಿಕ್ಕಿರುವುದಿಲ್ಲ. ನಂತರ ಚಾಸಾ-11 ಮತ್ತು ಪಂಚರಾದ ಚಾಸಾ-2 ಮತ್ತು 3 ರವರ ಸಮಕ್ಷಮ ವಾಹನವನ್ನು ಪರಿಶೀಲಿಸಲಾಗಿ ವಾಹನದಲ್ಲಿ ಮರಳು ತುಂಬಿರುವುದು ಕಂಡುಬಂದಿರುತ್ತದೆ. ಓಡಿ ಹೋದ ವ್ಯಕ್ತಿಯ ಹೆಸರು ಕೇಳಲಾಗಿ ಆತನ ಹೆಸರು ಹರೀಶ ಬಿನ್ ಚಂದ್ರನಾಯ್ಕ, ವಾಸ ಕರಕುಚ್ಚಿ ಗ್ರಾಮ ಎಂದು ತಿಳಿದಿದ್ದು, ನಂತರ ಚಾಸಾ-1 ರವರು ಪಂಚರ ಸಮಕ್ಷಮ ವರದಿಯನ್ನು ತಯಾರಿಸಿ, ಚಾಸಾ-9 ರವರ ಹಸ್ತ ವರದಿಯನ್ನು ಠಾಣೆಗೆ ಕಳುಹಿಸಿಕೊಟ್ಟಿರುತ್ತಾರೆ. ನಂತರ ಮರಳು ತುಂಬಿದ ವಾಹನವನ್ನು ಪಂಚರ ಸಮಕ್ಷಮ ಅಮಾನತ್ತುಪಡಿಸಿಕೊಂಡು ಲಕ್ಕವಳ್ಳಿ ಪೊಲೀಸ್ ಠಾಣೆಗೆ ತಂದು ನಿಲ್ಲಿಸಿರುತ್ತೇವೆ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮತ್ತು ಅಮಾನತ್ತು ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಡಿ) ಎಂದು ಗುರುತಿಸಲಾಯಿತು.

ಸಾಕ್ಷಿಯು ನಿಪಿ-4 ಮತ್ತು 5 ಛಾಯಚಿತ್ರಗಳಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

**<u>ಪಾಟೀ ಸವಾಲು : ಆರೋಪಿತರ ಪರ ಶ್ರೀ ಕೆ ಪಿ ವಕೀಲರಿಂದ.</u>**

ನಿಮಗೆ ಅಕ್ರಮವಾಗಿ ಮರಳು ತುಂಬುತ್ತಿರುವ ಬಗ್ಗೆ ಯಾವುದೇ ಕರೆ ಬಂದಿರುವುದಿಲ್ಲ ಎಂದರೆ ಸರಿಯಲ್ಲ. ನಿಮ್ಮನ್ನು ನೋಡಿ ಆರೋಪಿ ವಾಹನ ನಿಲ್ಲಿಸಿ ಓಡಿ ಹೋಗಲು ಪ್ರಯತ್ನಿಸಿದರು ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಾ ಎಂದರೆ ಸರಿಯಲ್ಲ. ಪಂಚರುಗಳನ್ನು ಈ ಪ್ರಕರಣಕ್ಕಾಗಿ ಸೃಷ್ಠಿ ಮಾಡಿರುತ್ತೀರಾ ಎಂದರೆ ಸರಿಯಲ್ಲ. ಸ್ಥಳದಲ್ಲಿ ಯಾವುದೇ ವರದಿಯನ್ನು ತಯಾರಿಸಿಲ್ಲ, ಯಾವುದೇ ಮಹಜರ್ ಮಾಡಿಲ್ಲ ಎಂದರೆ ಸರಿಯಲ್ಲ.

ಆರೋಪಿ ಯಾವುದೇ ತಪ್ಪನ್ನು ಮಾಡದೇ ಇದ್ದರೂ ಸಹ ಆರೋಪಿಯ ಮಾತು ಕೇಳಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದರಾ ಎಂದರೆ ಸರಿಯಲ್ಲ.

**ಮರುವಿಚಾರಣೆಃ** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ. ಕೇ. ಸ. ಇ. ಎ. ಒ.**

ಸಹಿ/-

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

**ಪ್ರ.ದ.ನ್ಯಾ.ದಂ. ರವರು, ತರೀಕೆರೆ.**